ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

9

ಇಲಾಖೆ / ವಿಷಯ : DEPARTMENT / SUBJECT: ಸಂತಾಪ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE : 13/10/2021

# ಮಾಜಿ ಶಾಸಕ ಮಲ್ಲಪ್ಪ ನಿಧನ

ದಾವಣಗೆರೆ: ಹಿರಿಯ ರಾಜಕಾರಣಿ ಹಾಗೂ ಮಾಜಿ ಶಾಸಕ ಕೆ. ಮಲ್ಲಪ್ಪ (92) ಸೋಮವಾರ ಬೆಳಗ್ಗೆ ನಗರದ ಆಂಜನೇಯ ಬಡಾವಣೆಯ ನಿವಾಸದಲ್ಲಿ ನಿಧನರಾದರು. ಕೆಲ ದಿನಗಳಿಂದ ಅನಾರೋಗ್ಯದಿಂದ ಬಳಲುತ್ತಿದ್ದ ಅವರು, ಇಬ್ಬರು ಪುತ್ರರು ಸೇರಿ ಅಪಾರ ಬಂಧು-ಬಳಗ ಅಗಲಿದ್ದಾರೆ. ಸೋಮವಾರ ಸಂಜೆ ದಾವಣಗೆರೆಯ ಹಿಂದೂ ರುದ್ರಭೂಮಿಯಲ್ಲಿ ಅಂತ್ಯ ಸಂಸ್ಕಾರ ನೆರವೇರಿತು.



1929ರ ಏ.15ರಂದು ಜನಿಸಿದ್ದ ಕೆ. ಮಲ್ಲಪ್ಪ ಜನಸೇವೆಯಲ್ಲಿ ನಿರತರಾಗಿ ರಾಜಕೀಯ ಪ್ರವೇಶ ಮಾಡಿದ್ದರು. 1983ರಲ್ಲಿ ಹರಿಹರ ವಿಧಾನಸಭಾ ಕ್ಷೇತ್ರ, 1985ರಲ್ಲಿ ಮಾಯಕೊಂಡ ವಿಧಾನಸಭಾ ಕ್ಷೇತ್ರದಿಂದ ಶಾಸಕರಾಗಿ ಆಯ್ಕೆಯಾದರು. ಒಂದು ಬಾರಿ ವಿಧಾನ ಪರಿಷತ್ ಸದಸ್ಯರೂ ಆಗಿದ್ದರು. ದೇವರಾಜ ಅರಸು ಹಿಂದುಳಿದ ವರ್ಗಗಳ ನಿಗಮ ಹಾಗೂ ಬಯಲುಸೀಮೆ ಮಂಡಳಿ ಅಧ್ಯಕ್ಷರಾಗಿ ಜನಸೇವೆಯಲ್ಲಿ ತೊಡಗಿದ್ದರು. ಕಾಗಿನೆಲೆ ಮಹಾಸಂಸ್ಥಾನ ಪೀಠ ನಿರ್ಮಾಣ ಸಮಿತಿ ಸಂಸ್ಥಾಪಕ ಅಧ್ಯಕ್ಷರಾಗಿ ಪೀಠ ನಿರ್ಮಾಣದಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ಪ್ರದೇಶ ಕುರುಬರ ಸಂಘದ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದ್ದರು. ರಾಮಕೃಷ್ಣ ಹೆಗಡೆ ಮುಖ್ಯಮಂತ್ರಿಗಳಾಗಿದ್ದಾಗ ಕುರುಬ ಸಮಾಜವನ್ನು ಎಸ್ಟಿ ಪಟ್ಟಿಗೆ ಸೇರಿಸಬೇಕೆಂದು ಹೋರಾಟ ಮಾಡಿದ್ದರು. ಮಾಜಿ ಸಿಎಂ ಸಿದ್ದರಾಮಯ್ಯ ಆಪ್ತರಾಗಿದ್ದ ಕೆ. ಮಲ್ಲಪ್ಪ ಅಹಿಂದ ಸಂಘಟನೆ ಪ್ರಮುಖ ರೂವಾರಿ. ಕುಸ್ತಿ ಜೀರ್ಣೋದ್ಧಾರಕ ಸಂಘದ ಅಧ್ಯಕ್ಷರಾಗಿ ಹೆಸರುವಾಸಿಯಾಗಿದ್ದ ಅವರು ಸ್ವತಃ ಕುಸ್ತಿಪಟುಗಳಾಗಿ ನೂರಾರು ಕ್ರೀಡಾಪಟುಗಳನ್ನು ಬೆಳೆಸಿದ್ದಾರೆ.

ಸಂತಾಪ: ಸಚಿವ ಕೆ.ಎಸ್. ಈಶ್ವರಪ್ಪ ಅವರು ಮಲ್ಲಪ್ಪ ನಿವಾಸಕ್ಕೆ ತೆರಳಿ ಅಂತಿಮ ದರ್ಶನ ಪಡೆದರು. ಉಸ್ತುವಾರಿ ಸಚಿವ ಬಿ.ಎ.ಬಸವರಾಜ್, ಸಂಸದ ಜಿ.ಎಂ.ಸಿದ್ದೇಶ್ವರ್, ಶಾಸಕ ಶಾಮನೂರು ಶಿವಶಂಕರಪ್ಪ, ಮಾಜಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಸೇರಿ ಇತರರು ಸಂತಾಪ ವ್ಯಕ್ತಪಡಿಸಿದ್ದಾರೆ.